**03.05.2025 ಪ್ರದೇಶ ಸಮಾಚಾರ 6.40**

## ಮುಖ್ಯಾಂಶಗಳು

1. ಕೃಷ್ಣಾ ನದಿ ನೀರು ವಿವಾದ ; ಗೆಜೆಟ್ ಅಧಿಸೂಚನೆ ಹೊರಡಿಸುವಂತೆ ಕೇಂದ್ರಕ್ಕೆ ಒತ್ತಾಯ – ಮುಖ್ಯಮಂತ್ರಿ ಸಿದ್ದರಾಮಯ್ಯ

2. ಕರಾವಳಿಯಲ್ಲಿ ಕೋಮು ಚಟುವಟಿಕೆ ನಡೆಸಿದರೆ ನಿರ್ದಾಕ್ಷಿಣ್ಯ ಕ್ರಮ – ಗೃಹ ಸಚಿವ ಡಾ. ಪರಮೇಶ್ವರ್ ಎಚ್ಚರಿಕೆ

3. ದೇಶಾದ್ಯಂತ ನಾಳೆ ನೀಟ್ – ಯುಜಿ ಪರೀಕ್ಷೆ ; 1 ಲಕ್ಷದ 49 ಸಾವಿರ ವಿದ್ಯಾರ್ಥಿಗಳಿಂದ ನೋಂದಣಿ

4. ಹಾಸನದ ಆಲೂರಿನಲ್ಲಿ ಅರಣ್ಯ ಇಲಾಖೆಯಿಂದ ಕಾಡಾನೆ ಸೆರೆ ಕಾರ್ಯಾಚರಣೆ ಯಶಸ್ವಿ

5. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು–ಚೆನ್ನೈ ಸೂಪರ್ ಕಿಂಗ್ಸ್ ಹಣಾಹಣಿ

Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಸಿದ್ದರಾಮಯ್ಯ**

ಕೇಂದ್ರದ ಜಲಶಕ್ತಿ ಸಚಿವರು ಇದೇ 7 ರಂದು ಕೃಷ್ಣಾ ಕಣಿವೆಯ ಸಭೆ ಕರೆದಿದ್ದು, ಸಭೆಯಲ್ಲಿ ಗೆಜೆಟ್ ಅಧಿಸೂಚನೆ ಹೊರಡಿಸಲು ಒತ್ತಾಯಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಭೆಗೆ ಪೂರಕವಾಗಿ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವರು, ಕಾನೂನು ತಜ್ಞರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ಸಭೆಯಲ್ಲಿ ರಾಜ್ಯದ ನಿಲುವು ಏನಿರಬೇಕೆಂದು ಚರ್ಚಿಸಲಾಗಿದೆ ಎಂದು ಹೇಳಿದ್ದಾರೆ.

ಎರಡನೇ ನ್ಯಾಯಾಧಿಕರಣದ ಆದೇಶದಲ್ಲಿ 173 ಟಿ.ಎಂ.ಸಿ ನೀರನ್ನು ಬಳಸಿಕೊಳ್ಳಲು ಸೂಚಿಸಲಾಗಿದೆ. 519 ಮೀಟರ್ ಗಳಿಂದ 524 ಮೀಟರ್‌ಗಳಿಗೆ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸಿದರೆ ಕರ್ನಾಟಕಕ್ಕೆ ಹಂಚಿಕೆ ಮಾಡಿರುವ ನೀರನ್ನು ಬಳಸಿಕೊಳ್ಳಲು ಸಾಧ್ಯವಾಗಲಿದೆ. ಅದಕ್ಕಾಗಿ ಗೆಜೆಟ್ ಅಧಿಸೂಚನೆ ಹೊರಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

Source : CM GROUP/Edited by Vimalakshi., Editor
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಡಾ. ಜಿ. ಪರಮೇಶ್ವರ್**

ಕರಾವಳಿಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೋಮು ಹಿಂಸಾಚಾರ ನಿಯಂತ್ರಿಸಲು ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ರಚಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಗೃಹ ಸಚಿವರು, ಕೋಮು ಚಟುವಟಿಕೆಗಳನ್ನು ನಡೆಸುವವರು ಹಾಗೂ ಅವರನ್ನು ಬೆಂಬಲಿಸುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**ಧ್ವನಿ : ಪರಮೇಶ್ವರ್**

ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ ಒಟ್ಟು 8 ಆರೋಪಿಗಳನ್ನು ಹಾಗೂ ಅಶ್ರಫ್ ಹತ್ಯೆ ಪ್ರಕರಣದಲ್ಲಿ 21 ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನಕ್ಸಲ್ ನಿಗ್ರಹ ದಳವನ್ನು ಬರ್ಕಾಸ್ತುಗೊಳಿಸಿ ಅದರಲ್ಲಿರುವ ಸಿಬ್ಬಂದಿಯನ್ನು ಕೋಮು ಹಿಂಸೆ ನಿಗ್ರಹ ಪಡೆಗೆ ಬಳಸಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

Source : PTC-Dakshina Kannada
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಮುಖ್ಯಮಂತ್ರಿ–ಸಂವಿಧಾನ**

ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದ್ದು, ಸಂವಿಧಾನಕ್ಕೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳುವುದು ಎಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ಯಲಹಂಕದಲ್ಲಿ ಇಂದು 14 ಅಡಿಗಳ ಬಾಬಾ ಸಾಹೇಬ್ ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ನಮಗೆ ರಾಜಕೀಯ ಸ್ವಾತಂತ್ರ್ಯ ಸಿಕ್ಕಿದ್ದು, ಸಾಮಾಜಿಕ ಆರ್ಥಿಕ ಸ್ವಾತಂತ್ರ್ಯ ಸಿಕ್ಕಿಲ್ಲ. ಎಲ್ಲಿವರೆಗೂ ಇದು ಸಿಗುವುದಿಲ್ಲವೊ ಅಲ್ಲಿಯವರೆಗೆ ಸಮಾಜದಲ್ಲಿ ಸಮಾನತೆ ಕಾಣಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

Source : CM GROUP
Translated by ------
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ನೀಟ್**

ದೇಶಾದ್ಯಂತ ನಾಳೆ ನೀಟ್ – ಯುಜಿ ಪರೀಕ್ಷೆ ನಡೆಯಲಿದೆ. ರಾಜ್ಯದ ಬೆಂಗಳೂರು, ಮೈಸೂರು, ಮಂಗಳೂರು, ಬೆಳಗಾವಿ, ಕಲಬುರಗಿ, ಧಾರವಾಡ, ಮಂಡ್ಯ ಸೇರಿದಂತೆ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ರಾಜ್ಯದ 381 ಪರೀಕ್ಷಾ ಕೇಂದ್ರಗಳಲ್ಲಿ ಒಂದು ಲಕ್ಷ 49 ಸಾವಿರದ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಪರೀಕ್ಷೆ ನಡೆಯಲಿದ್ದು, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ 1.30ರೊಳಗೆ ಹಾಜರಿರುವಂತೆ ಸೂಚಿಸಲಾಗಿದೆ.

ಅಭ್ಯರ್ಥಿಗಳಿಗೆ ಈಗಾಗಲೇ ವಸ್ತ್ರ ಸಂಹಿತೆ ಸಹಿತ ಪ್ರಮುಖ ಸೂಚನೆಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.

ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಡ್ಡಾಯವಾಗಿರಲಿದೆ. ಅಭ್ಯರ್ಥಿಗಳು ಪೂರ್ಣತೋಳಿರುವ ಮೇಲಂಗಿಯನ್ನು ಹಾಗೂ ದೊಡ್ಡ ಬಟನ್‌ಗಳಿರುವ ಶರ್ಟ್, ಕಿವಿಓಲೆ, ಬಳೆ, ಮೂಗುತಿ ಸೇರಿದಂತೆ ಯಾವುದೇ ಮೆಟಲ್ ಉಪಕರಣಗಳನ್ನು ಧರಿಸುವಂತಿಲ್ಲ.

Source : Vimalakshi
Edited by Vimalakshi
Typed by Mamatha

# 03.05.2025 ಪ್ರದೇಶ ಸಮಾಚಾರ 6.40 ಕಾಡಾನೆ ಸೆರೆ

ಹಾಸನ ಜಿಲ್ಲೆಯ ಆಲೂರು ತಾಲೂಕಿನ ಹಳ್ಳಿಯೂರು ಗ್ರಾಮದಲ್ಲಿ ಎರಡನೇ ದಿನದ ಕಾಡಾನೆ ಸೆರೆ ಕಾರ್ಯಾಚರಣೆ ಯಶಸ್ವಿಯಾಗಿದೆ. ಅಡಕ – ಬಡಕ ಎಂಬ ಹೆಸರಿನ ಕಾಡಾನೆ ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ.

ಆಲೂರು ತಾಲೂಕಿನ ಪಾರ್ವತಮ್ಮ ಬೆಟ್ಟದಲ್ಲಿ ಕಾಡಾನೆ ಅಡಗಿದೆ ಎಂಬುದನ್ನು ಪತ್ತೆ ಹಚ್ಚಿದ್ದ ಇ.ಟಿ.ಎಫ್ ಸಿಬ್ಬಂದಿ ಆನೆಗೆ ಅರವಳಿಕೆ ಚುಚ್ಚುಮದ್ದು, ನೀಡಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಡಿಎಫ್‌ಓ ಸೌರವ್ ಕುಮಾರ್ ಹಾಗೂ ಹೇಮಂತ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದ್ದು,  ಕಂಜನ್, ಕರ್ನಾಟಕ, ಭೀಮ, ಮಹೇಂದ್ರ, ಧನಂಜಯ ಏಕಲವ್ಯ, ಸುಗ್ರೀವ ಸಾಕಾನೆಗಳು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದವು.

Source : PTC-Hassan
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಈಶ್ವರ್ ಖಂಡ್ರೆ**

ಪಾಕಿಸ್ತಾನದ ವಿಚಾರದಲ್ಲಿ ಕಾಂಗ್ರೆಸ್ ಲೋಕಸಭೆಯ ಪ್ರತಿಪಕ್ಷವಾಗಿ ಕೇಂದ್ರ ಸರ್ಕಾರಕ್ಕೆ ಎಲ್ಲ ರೀತಿಯ ಸಹಾಯ ನೀಡಲಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರಾವಳಿಯಲ್ಲಿ ನಡೆದ ಕೃತ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಆರೋಪಿಗಳನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಜನಗಣತಿಯ ಜೊತೆಗೆ ಜಾತಿ ಗಣತಿ ಮಾಡುವ ಕೇಂದ್ರ ಸರ್ಕಾರದ ನಿರ್ಧಾರ ಸ್ವಾಗತಾರ್ಹ ಎಂದು ತಿಳಿಸಿದ್ದಾರೆ.

Source : PTC-Davanagere
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ವಿಜಯನಗರ**

ವಿಜಯನಗರ ಜಿಲ್ಲೆಯಲ್ಲಿ ವಿಶೇಷ ಸಂಪುಟ ಸಭೆ ನಡೆಸಿದರೆ ಜಿಲ್ಲೆಗೆ ವಿಶೇಷ ಅನುದಾನ ದೊರೆತು, ಜಿಲ್ಲೆಯ ಅಭಿವೃದ್ಧಿ ಸಾಧ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಇಂದು ನಡೆದ ಕೆಡಿಪಿ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿಯ ಬಜೆಟ್ ನಲ್ಲಿ ಜಿಲ್ಲೆಗೆ ವಿಶೇಷ ಅನುದಾನ ದೊರೆತಿಲ್ಲದ ಹಿನ್ನೆಲೆಯಲ್ಲಿ ನೂತನ ವಿಜಯನಗರ ಜಿಲ್ಲೆಯಲ್ಲಿ ವಿಶೇಷ ಸಂಪುಟ ಸಭೆಯನ್ನು ಆಯೋಜಿಸಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕೆಡಿಪಿ ಸಭೆಗೂ ಮುನ್ನ ಜಿಲ್ಲಾಮಟ್ಟದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಅಹವಾಲುಗಳನ್ನು ಸ್ವೀಕರಿಸಲಾಯಿತು.

Source : PTC-Vijayanagar
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಪಂಚ ಗ್ಯಾರಂಟಿ**

ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು ಎಂದು ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಬಿ.ಬಿ ಅಸೂಟಿ ತಿಳಿಸಿದ್ದಾರೆ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಛೇರಿಯಲ್ಲಿ ನಡೆದ ಸಭೆಯಲ್ಲಿ ಸರ್ಕಾರದಿಂದ ಅನುಷ್ಠಾನವಾಗಿರುವ ಪಂಚ ಗ್ಯಾರಂಟಿ ಯೋಜನೆ ಪಡೆಯುವಲ್ಲಿ ಎದುರಾಗುವ ಸಮಸ್ಯೆಗಳ ಪರಿಹಾರಕ್ಕೆ ಜನತಾ ಸದನವನ್ನು ಪ್ರಾರಂಭಿಸಲಾಗಿದೆ.

ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಿರುವ ಜನತಾ ಸದನದಲ್ಲಿ ಪಾಲ್ಗೊಂಡು ಸಮಸ್ಯೆಗಳ ಪರಿಹಾರ ಕಂಡುಕೊಳ್ಳಬೇಕು. ಜಿಲ್ಲೆಯ ಪಂಚ ಗ್ಯಾರಂಟಿ ಯೋಜನೆಯಿಂದ ಹೊರಗುಳಿದ ಸಾರ್ವಜನಿಕರು ಜನತಾ ಸದನವನ್ನು ಸಂಪರ್ಕಿಸಬಹುದಾಗಿದೆ ಎಂದು ಅಸೂಟಿ ಮಾಹಿತಿ ನೀಡಿದರು.

Source : PTC-Gadag
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಮಂಡ್ಯ**

ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಹೆಚ್. ಎನ್ ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದಿಂದ ದತ್ತಾಂಶ ಶೇಖರಿಸುವ ಸಮೀಕ್ಷೆ ಮಂಡ್ಯ ಜಿಲ್ಲೆಯಲ್ಲಿ ಇದೇ 5ರಿಂದ 17ರವರೆಗೆ ನಡೆಯಲಿದೆ. ಪರಿಶಿಷ್ಟ ಜಾತಿ ಸಮುದಾಯ ಹಾಗೂ ವಿವಿಧ ಸಂಘ ಸಂಸ್ಥೆಯ ಮುಖಂಡರುಗಳು ಸಮೀಕ್ಷೆಯ ಬಗ್ಗೆ ಪರಿಶಿಷ್ಟ ಜಾತಿಯ ಕುಟುಂಬದವರಿಗೆ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಇದೇ 5 ರಿಂದ 17 ರವರೆಗೆ ಮನೆ ಮನೆ ಸಮೀಕ್ಷೆ ನಡೆಯಲಿದೆ. 10 ಗಣತಿದಾರರಿಗೆ ಒಬ್ಬರೂ ಸೂಪರ್ವೈಸರ್ ನೇಮಕ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

Source : PTC-Mandya
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಜಗದೀಶ್ ಶೆಟ್ಟರ್**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥಿತ ಸಂಪೂರ್ಣ ಹದಗೆಟ್ಟಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಸುಹಾಸ್ ಶೆಟ್ಟಿ ಕೊಲೆ ಪ್ರಕರಣ ದುರ್ದೈವದ ಸಂಗತಿ ಎಂದು ತಿಳಿಸಿದ್ದಾರೆ.

ಘಟನೆ ಬಳಿಕ ಸರ್ಕಾರ ಯಾವುದೇ ರೀತಿಯ ಮುಂಜಾಗ್ರತಾ ಕ್ರಮ ಕೈಗೊಂಡಿಲ್ಲ ಎಂದು ದೂರಿದ್ದಾರೆ.

Source : PTC-Dharwad
Edited by Vimalakshi
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಹವಾಮಾನ**

ರಾಜ್ಯದ ವಿವಿಧೆಡೆ ಮಳೆಯಾಗಿದ್ದು, ದಾವಣಗೆರೆ ಹೊನ್ನಾಳಿಯಲ್ಲಿ 9 ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರಿನಲ್ಲಿ 5 ಸೆಂಟಿ ಮೀಟರ್ ಮಳೆಯಾಗಿದೆ.

ಬೆಂಗಳೂರಿನಲ್ಲಿ ಮುಂದಿನ 2 ದಿನಗಳ ಕಾಲ ಸಂಜೆ ಹಾಗೂ ರಾತ್ರಿ ವೇಳೆಗೆ ಗುಡುಗು–ಮಿಂಚು, ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಇಂದಿನಿಂದ ಮುಂದಿನ 5 ದಿನಗಳ ಕಾಲ ಗುಡುಗು, ಮಿಂಚು, ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಮುನ್ಸೂಚನೆ ನೀಡಿದ್ದಾರೆ.

Source : Weather Report
Edited by Vimalakshi.
Typed by Mamatha

**03.05.2025 ಪ್ರದೇಶ ಸಮಾಚಾರ 6.40 ಐಪಿಎಲ್ ಕ್ರಿಕೆಟ್**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ.

ಪಂದ್ಯ ರಾತ್ರಿ 7.30ಕ್ಕೆ ಆರಂಭವಾಗಲಿದೆ. ಈಗಾಗಲೇ ಟೂರ್ನಿಯಲ್ಲಿ 7 ಗೆಲುವು ದಾಖಲಿಸುವುದರೊಂದಿಗೆ ಆರ್‌ಸಿಬಿ ಪ್ಲೇ ಆಫ್‌ಗೆ ಅರ್ಹತೆ ಪಡೆಯುವ ಸಮೀಪದಲ್ಲಿದೆ.

ಆಡಿರುವ ಹತ್ತು ಪಂದ್ಯಗಳಲ್ಲಿ 8 ಪಂದ್ಯಗಳನ್ನು ಸೋತಿರುವ ಚೆನ್ನೈ ಸೂಪರ್ ಕಿಂಗ್ಸ್ ಪಂದ್ಯಾವಳಿಯಿಂದ ಅಧಿಕೃತವಾಗಿ ಹೊರ ಬಿದ್ದಿದ್ದು, ಇಂದಿನ ಪಂದ್ಯ ಔಪಚಾರಿಕವಾಗಿದೆ.

Source : NP
Edited by Vimalakshi
Typed by Mamatha

**3.05.2025 ಪ್ರದೇಶ ಸಮಾಚಾರ 6.40 ಸಂಕ್ಷಿಪ್ತ ಸುದ್ದಿಗಳು**

1. **ಬೆಳಗಾವಿ ಜಿಲ್ಲೆ** ಖನಗಾಂವ ಬಿಕೆ ಗ್ರಾಮದಲ್ಲಿ ಸಿಡಿಲು ಬಡಿದು ಮೃತಪಟ್ಟ ಬಾಲಕಿಯ ಕುಟುಂಬಕ್ಕೆ ಇಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ 5 ಲಕ್ಷ ರೂಪಾಯಿ ಪರಿಹಾರ ವಿತರಿಸಿದರು.
2. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ **ಗದಗ** ವಿಭಾಗದ ಆಶ್ರಯದಲ್ಲಿ ಸಾರಿಗೆ ಸಂಸ್ಥೆಯ ಸಿಬ್ಬಂದಿಗಳಿಗೆ ಚಿಕುನ್‌ಗುನ್ಯಾ, ಮಲೇರಿಯಾ, ಮೆದುಳು ಜ್ವರ, ಆನೆಕಾಲು ರೋಗ, ಸೇರಿದಂತೆ ಸಾಂಕ್ರಾಮಿಕ ಕಾಯಿಲೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು.
3. ಕೇಂದ್ರ ಸರ್ಕಾರ ಜನಗಣತಿ ಜೊತೆಗೆ ಜಾತಿಗಣತಿ ಮಾಡಲು ತೆಗೆದುಕೊಂಡಿರುವ ನಿರ್ಧಾರ ಒಳ್ಳೆಯದು ಎಂದು **ಕೋಲಾರ** ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದ್ದಾರೆ.
4. ಕನ್ನಡ ಖ್ಯಾತ ಸಾಹಿತಿ, ಚಿಂತಕ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ ಅವರಿಗೆ 2024ನೇ ಸಾಲಿನ ಬಸವರಾಜ ಕಟ್ಟಿಮನಿ ಟ್ರಸ್ಟ್ ನ ಜೀವಮಾನ ಸಾಧನೆ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು 50 ಸಾವಿರ ರೂಪಾಯಿಗಳ ನಗದು ಪ್ರಶಸ್ತಿ ಫಲಕ ಒಳಗೊಂಡಿರುತ್ತದೆ. ಪ್ರೊಫೆಸರ್ ಬರಗೂರು ರಾಮಚಂದ್ರಪ್ಪನವರ ಒಟ್ಟು ಕಾದಂಬರಿ ಸಾಹಿತ್ಯ ಸಾಧನೆಯನ್ನು ಪರಿಗಣಿಸಲಾಗಿದೆ. **(ಬೆಳಗಾವಿ)**

**ನಮ್ಮ ಮುಂದಿನ ವಾರ್ತಾ ಪ್ರಸಾರ 7.35**

Source : PTC-Gadag/Kolar/Belagavi
Edited by Vimalakshi
Typed by Mamatha